**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ,**
**ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು.**

**ಎಸ್.ಸಿ.ನಂ.278/2023**

ಪಿರ್ಯಾದುದಾರರು : ಸರ್ಕಾರದ ಪರ ಬ್ಯಾಡರಹಳ್ಳಿ ಪೊಲೀಸರು

- ವಿರುದ್ಧ -

ಆರೋಪಿ : 1. ಅರುಣ್ ಕುಮಾರ್,
ತಂದೆ: ನಾಗರಾಜು,
ವಯಸ್ಸು 27 ವರ್ಷ
ವಾಸ: 4 ನೇ ಕ್ರಾಸ್,
ತಿಗಳರಪಾಳ್ಯ ಕಾಲೋನಿ,
ಅಂದ್ರಹಲ್,
ಸ್ಥಳೀಯ ವಾಸಃ ಚುಂಚನಕುಪ್ಪೆ,
ಕೆಂಗೇರಿ ಹೋಬಳಿ,
ಬೆಂಗಳೂರು ದಕ್ಷಿಣ ತಾಲ್ಲೂಕು,
ಬೆಂಗಳೂರು ನಗರ.

**ದೋಷಾರೋಪಣೆ**

ನಾನು, ಶ್ರೀ ಎಂ. ಎಲ್. ರಘುನಾಥ್ ಬಿ.ಎ., ಎಲ್‌ಎಲ್.ಎಮ್, ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು, ನಿಮ್ಮ – ಆರೋಪಿಯ ಮೇಲೆ ಮಾಡುವ ದೋಷಾರೋಪಣೆ ಏನೆಂದರೆ:

ದಿನಾಂಕ:30.06.2023 ರಂದು ರಾತ್ರಿ ಸುಮಾರು 11-30 ಗಂಟೆಯ ಸಮಯದಲ್ಲಿ ಆರೋಪಿಯಾದ ನೀವು, ಸಾಕ್ಷಿ-1 ರವರನ್ನು ಕೊಲೆ ಮಾಡುವ ಉದ್ದೇಶದಿಂದ ಮನೆ ನಂ.575, 3 ನೇ ಅಡ್ಡ ರಸ್ತೆ, ತಿಗಳಪಾಳ್ಯದಲ್ಲಿರುವ ಸಾಕ್ಷಿ-

1 ರವರ ಮನೆಗೆ ಅಕ್ರಮ ಪ್ರವೇಶ ಮಾಡಿದ್ದು, ಭಾರತೀಯ ದಂಡ ಸಂಹಿತೆ ಕಲಂ 450 ರನ್ವಯ ಅಪರಾಧ ಮಾಡಿರುತ್ತೀರಿ.

ಎರಡನೇಯದಾಗಿ, ಮೇಲೆ ಹೇಳಿದ ದಿನಾಂಕ, ಸ್ಥಳ ಹಾಗೂ ಸಮಯದಲ್ಲಿ, ಆರೋಪಿಯಾದ ನೀವು, ಸಾಕ್ಷಿ-1 ರವರ ಮನೆಗೆ ಅಕ್ರಮ ಪ್ರವೇಶ ಮಾಡಿ, ಆಕೆಯು ಧರಿಸಿದ್ದ ಬಟ್ಟೆಯನ್ನು ಹರಿದು, ಅಸಭ್ಯವಾಗಿ ನಡೆದುಕೊಂಡು ಮೈಕೈ ಮುಟ್ಟಿ ಮಾನಭಂಗ ಮಾಡಿದ್ದು, ಭಾರತೀಯ ದಂಡ ಸಂಹಿತೆ ಕಲಂ 354(B) ರನ್ವಯ ಅಪರಾಧ ಮಾಡಿರುತ್ತೀರಿ.

ಮೂರನೇಯದಾಗಿ, ಮೇಲೆ ಹೇಳಿದ ದಿನಾಂಕ, ಸ್ಥಳ ಹಾಗೂ ಸಮಯದಲ್ಲಿ, ಸಾಕ್ಷಿ-1 ರವರಿಗೆ ಸುಮಾರು 8 ವರ್ಷಗಳ ಹಿಂದೆ ಅಂಜನಮೂರ್ತಿ ಎಂಬುವರೊಂದಿಗೆ ಮದುವೆಯಾಗಿದ್ದು, ಸುಮಾರು 5-6 ತಿಂಗಳ ಹಿಂದೆ ಮೃತಪಟ್ಟಿದ್ದು, ನಂತರ ಸಾಕ್ಷಿ-1 ರವರು ತನ್ನ ನಾಲ್ಕು ವರ್ಷದ ಮೈಥಿಲಿ ಎಂಬ ಮಗಳೊಂದಿಗೆ ಮನೆಯಲ್ಲಿ ವಾಸವಿದ್ದು, ಅದೇ ಏರಿಯಾದಲ್ಲಿ ವಾಸವಿದ್ದ ಆರೋಪಿಯಾದ ನೀವು, ಸಾಕ್ಷಿ-1 ರವರ ಮನೆಗೆ ಬಂದು ಅಸಭ್ಯವಾಗಿ ನಡೆದುಕೊಳ್ಳುತ್ತಿದ್ದು, ಇದನ್ನು ವಿರೋಧಿಸಿದ್ದಕ್ಕೆ ತಾನು ಹೇಳಿದಂತೆ ಇರಬೇಕು ಸೂಳೆ ಮುಂಡೆ ಎಂದು ಅವಾಚ್ಯ ಶಬ್ದಗಳಿಂದ ಬೈಯ್ದು ನಿಂದಿಸಿದ್ದು ಭಾರತೀಯ ದಂಡ ಸಂಹಿತೆ ಕಲಂ 504 ರನ್ವಯ ಅಪರಾಧ ಮಾಡಿರುತ್ತೀರಿ.

ನಾಲ್ಕನೇಯದಾಗಿ, ಮೇಲೆ ಹೇಳಿದ ದಿನಾಂಕ, ಸ್ಥಳ ಹಾಗೂ ಸಮಯದಲ್ಲಿ, ಆರೋಪಿಯಾದ ನೀವು, ಸಾಕ್ಷಿ-1 ರವರ ಮನೆಗೆ ನುಗ್ಗಿ, ಅಸಭ್ಯವಾಗಿ ನಡೆದುಕೊಳ್ಳುತ್ತಿದ್ದು, ಇದನ್ನು ವಿರೋಧಿಸಿದ್ದಕ್ಕೆ ತಾನು ಹೇಳಿದಂತೆ ಇರಬೇಕು ಇಲ್ಲದಿದ್ದರೆ ನಿನ್ನ ಮಗಳನ್ನು ಸಾಯಿಸುವುದಾಗಿ ಜೀವ ಬೆದರಿಕೆ ಹಾಕಿದ್ದು ಭಾರತೀಯ ದಂಡ ಸಂಹಿತೆ ಕಲಂ 506 ರನ್ವಯ ಅಪರಾಧ ಮಾಡಿರುತ್ತೀರಿ.

ಕೊನೇಯದಾಗಿ, ಮೇಲೆ ಹೇಳಿದ ದಿನಾಂಕ, ಸ್ಥಳ ಹಾಗೂ ಸಮಯದಲ್ಲಿ, ಆರೋಪಿಯಾದ ನೀವು, ಸಾಕ್ಷಿ-1 ರವರ ಮನೆಗೆ ನುಗ್ಗಿ, ಕೊಲೆ ಮಾಡುವ ಉದ್ದೇಶದಿಂದ ಸಾಕ್ಷಿ-1 ರವರ ಮನೆಗೆ ಅಕ್ರಮ ಪ್ರವೇಶ ಮಾಡಿ, ಆಕೆಯು ಧರಿಸಿದ್ದ ಬಟ್ಟೆಯನ್ನು ಹರಿದು, ಮೈಕೈ ಮುಟ್ಟಿ ಮಾನಭಂಗ ಮಾಡಿದ್ದು, ಇದಕ್ಕೆ ವಿರೋಧ ವ್ಯಕ್ತಪಡಿಸಿದ್ದಕ್ಕೆ ಸಾಕ್ಷಿ-1 ರವರ ಕೈಯಲ್ಲಿದ್ದ ಮೊಬೈಲ್ ಕಿತ್ತುಕೊಂಡು ಅದೇ ಮೊಬೈಲ್ ನಿಂದ ಆಕೆಯ ಹಣೆ, ತಲೆ ಮತ್ತು ಕಣ್ಣಿನ ಮೇಲೆ ಹೊಡೆದು, ನಂತರ ಮನೆಯಲ್ಲಿದ್ದ ಮುದ್ದೆ ತಿರುಗುವ ದೊಣ್ಣೆಯಿಂದ ಮೈಮೇಲೆ ಸಿಕ್ಕ ಸಿಕ್ಕ ಕಡೆಗಳಲ್ಲಿ ಹೊಡೆದು ಮಾರಣಾಂತಿಕವಾಗಿ ಹಲ್ಲೆ ಮಾಡಿ, ಕೊಲೆ ಮಾಡಲು ಪ್ರಯತ್ನ ಮಾಡಿದ್ದು ಭಾರತೀಯ ದಂಡ ಸಂಹಿತೆ ಕಲಂ 307 ರನ್ವಯ ಅಪರಾಧ ಮಾಡಿರುತ್ತೀರಿ.

ಈ ಅಪರಾಧವು ಈ ನ್ಯಾಯಾಲಯದ ಸಂಜ್ಞೆಯೊಳಗೆ ಇದ್ದು ಈ ನ್ಯಾಯಾಲಯದಲ್ಲಿ ವಿಚಾರಣೆಗೆ ಗುರಿಯಾಗತಕ್ಕದ್ದೆಂದು ಈ ಮೂಲಕ ನಿರ್ದೇಶಿಸುತ್ತೇನೆ.

**(ಈ ದಿನ ದಿನಾಂಕ 18 ನೇ ಮಾರ್ಚ್, 2024)**

**(ಎಂ.ಎಲ್. ರಘುನಾಥ್)**
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು.